# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

### ವಾರ್ಡ್ ನಂ.70 :ರಾಜಗೋಪಾಲನಗರ

**ದಿನಾಂಕ: 16.01.2021 ರಂದು ಮಧ್ಯಾಹ್ನ 3.00 ಗಂಟೆಗೆ ಶ್ರೀಮತಿ ಕಮಲ ಹೆಚ್ ನೋಡಲ್ ಅಧಿಕಾರಿ, ವಾರ್ಡ್ 70ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

**ಸಭೆಯಲ್ಲಿ ಹಾಜರಿದ್ದವರು:**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀಮತಿ ಕಮಲ ಹೆಚ್ | ನೋಡಲ್‌ಅಧಿಕಾರಿ-ವಾರ್ಡ್ ನಂ.70 |
| 2 | ಶ್ರೀ ಹೇಮಂತ್‌ಕುಮಾರ್‌ಎಸ್ ಕೆ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು-ವಾರ್ಡ್ 70 |
| 3 | ತ್ರಿವೇಣಿ | ಕಿರಿಯಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.70 |
| 4 | ಹೆಚ್. ನಾಗೇಂದ್ರ ರಾವ್ | ಕಂದಾಯ ಪರಿವೀಕ್ಷಕರು, ವಾರ್ಡ್ 70 |
| 5 | ಮಮತ ಆರ್ | ಲಿಂಕ್ ವರ್ಕರ್ |
| 6 | ಮಂಗಳಮ್ಮ | ಲಿಂಕ್ ವರ್ಕರ್ |
| 7 | ಕೆ ಪ್ರಭುದಾಸ್ | ಕಂದಾಯ ಪರಿವೀಕ್ಷಕರು, ವಾರ್ಡ್ 70 |
| 8 | ಪುಟ್ಟೇಗೌಡ | ಕಂದಾಯ ಮೌಲ್ಯಮಾಪಕರು |
| 9 | ಮರೀಗೌಡ ಮೂರ್ತಿ | ಗುತ್ತಿಗೆದಾರರು, ಬೀದಿದೀಪಗಳ ನಿರ್ವಹಣೆ |
| 10 | ಎಂ ಮಂಜುನಾಥ್ | ಬಿ.ಡಬ್ಲ್ಯೂ.ಎಸ್.ಎಸ್.ಬಿ |

**:ನಡಾವಳಿಯ ವರದಿ:**

ಸದಸ್ಯ ಕಾರ್ಯದರ್ಶಿಗಳಾದ ಶ್ರೀ ಹೇಮಂತ್‌ಕುಮಾರ್‌ಎಸ್ ಕೆ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್‌ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತಕೋರಿದರು.

- **ಹಿಂದಿನ ವಾರ್ಡ್ ಸಮಿತಿ ಸಭೆಯಲ್ಲಿ ಚರ್ಚಿಸಿದ ಸಮಸ್ಯೆಗಳಿಗೆ ಕೈಗೊಂಡ ಕ್ರಮಗಳ ಬಗ್ಗೆ**
  - **ಖಾಲಿ ಇರುವ ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿಗೆ ಕಂದಾಯ ಅಧಿಕಾರಿ ರವರ ಕಛೇರಿಯನ್ನು ಸ್ಥಳಾಂತರಿಸುವ ಬಗ್ಗೆ:** ಹೇಮಂತ್‌ಕುಮಾರ್ ಎಸ್.ಕೆ ಸಹಾಯಕ ಅಭಿಯಂತರರು, ವಾರ್ಡ್ ನಂ.70 ರವರು ಮಾತನಾಡಿ, ಬಾಕಿಯಿದ್ದ ಕೆಲಸಗಳು ಪೂರ್ಣಗೊಂಡಿದ್ದು, ಸ್ಥಳಾಂತರಿಸಲು ಕಟ್ಟಡವು ಸಿದ್ಧವಾಗಿದೆ ಎಂದು ತಿಳಿಸಿದರು.

- **ಸ್ವಚ್ಛತೆ ಮತ್ತು ಘನ ತ್ಯಾಜ್ಯ ನಿರ್ವಹಣೆ ಬಗ್ಗೆ:**
  - ತ್ರಿವೇಣಿ, ಕಿರಿಯ ಆರೋಗ್ಯ ಪರಿವೀಕ್ಷಕರು, ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿರುವ ಶಾಲೆಗಳು ಪುನರಾರಂಭವಾಗಿದ್ದು, ಶಾಲೆಗಳಲ್ಲಿ ಸ್ಯಾನಿಟೈಸ್ ಮಾಡಲಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.

  - ಶ್ರೀಮತಿ ಕಮಲ ಹೆಚ್.ನೋಡಲ್ ಅಧಿಕಾರಿ ವಾರ್ಡ್ 70ರವರು ಮಾತನಾಡಿ ಸ್ವಚ್ಛ ಸರ್ವೇಕ್ಷಣ ಅಭಿಯಾನ 2021 ರ ಬಗ್ಗೆ ಮಾತನಾಡಿ ಬೆಂಗಳೂರು ನಗರಕ್ಕೆ ವೋಟ್ ಮಾಡಿ, ರೇಟಿಂಗ್ ನೀಡುವಂತೆ ಕೋರಿದರು. ಅದಕ್ಕೆ ಸಂಬಂಧಿಸಿದ App and Website link ಗಳನ್ನು ಸಭೆಗೆ ನೀಡಿದರು.

- **ರಸ್ತೆ ಗುಂಡಿಗಳ ನಿರ್ವಹಣೆ ಬಗ್ಗೆ**
  - ಹೇಮಂತ್‌ಕುಮಾರ್ ಎಸ್.ಕೆ ಸಹಾಯಕ ಅಭಿಯಂತರರು, ವಾರ್ಡ್ ನಂ.70 ರವರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಬಿದ್ದಿರುವ ರಸ್ತೆಗುಂಡಿಗಳನ್ನು ಪಟ್ಟಿ ಮಾಡಿಕೊಂಡು ವೆಟ್ ಮಿಕ್ಸ್ ಅಳವಡಿಸಲಾಗಿದೆ. ಅಂದಾಜು 280 ಟನ್‌ಗಳಷ್ಟು ಡಾಂಬರು ಮಿಕ್ಸು ಬೇಕಾಗಿರುತ್ತದೆ ಎಂದು ತಿಳಿಸಿದರು.

- ಇನ್ನಿತರ ಸಮಸ್ಯೆಗಳ ಬಗ್ಗೆ:
  - ಶ್ರೀಮತಿ ಕಮಲ ಹೆಚ್, ನೋಡಲ್ ಅಧಿಕಾರಿ ವಾರ್ಡ್ 70ರವರು ಮಾತನಾಡಿ ವಾರ್ಡ್ ಸಮಿತಿ ಸಭೆಯಲ್ಲಿ ಸಾರ್ವಜನಿಕರು ಸಹ ಪಾಲ್ಗೊಳ್ಳುವುದು ಅವಶ್ಯಕವಿದ್ದು, ಸಭೆಯಲ್ಲಿ ಕುಂದು ಕೊರತೆಗಳನ್ನು ತಿಳಿಸಿದರೆ ಸಮಸ್ಯೆಗಳನ್ನು ಪರಿಹರಿಸಲು ಸಹಾಯವಾಗುತ್ತದೆ ಎಂದು ಅಭಿಪ್ರಾಯಿಸಿ ಮುಂದಿನ ಸಭೆಯಲ್ಲಿ ಕುಂದುಕೊರತೆಗಳನ್ನು ತಿಳಿಸಲು ಸಾರ್ವಜನಿಕರ ಪ್ರತಿನಿಧಿಯಾಗಿ ಸ್ಥಳೀಯ ನಾಗರೀಕರನ್ನು ಸಭೆಗೆ ಸದಸ್ಯರನ್ನಾಗಿ ಸೇರಿಸಿಕೊಳ್ಳಲು ಸೂಚಿಸಿದರು.

  BBMP SAHAYA APP:
  - ಹೇಮಂತ್‌ಕುಮಾರ್‌ಎಸ್.ಕೆ ಸಹಾಯಕ ಅಭಿಯಂತರರು, ವಾರ್ಡ್ ನಂ.70 ಮಾತನಾಡಿ ನಮ್ಮ ಇಲಾಖೆಗೆ ಸಂಬಂಧಪಟ್ಟ ದೂರುಗಳಿಗೆ ಶೀಘ್ರಗತಿಯಲ್ಲಿ ಪರಿಹಾರಕ್ರಮ ಕೈಗೊಳ್ಳುತ್ತಿದ್ದು, ಯಾವುದೇ ಸಮಸ್ಯೆಗಳು ಬಾಕಿ ಇರುವುದಿಲ್ಲ ಎಂದು ತಿಳಿಸಿದರು.
  - ತ್ರಿವೇಣಿ, ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ಘನ ತ್ಯಾಜ್ಯ ನಿರ್ವಹಣೆಗೆ ಸಂಬಂಧಪಟ್ಟ ದೂರುಗಳನ್ನು ಪರಿಹರಿಸಲಾಗಿದೆ ಹಾಗೂ ಯಾವುದೇ ಬಾಕಿ ಇರುವುದಿಲ್ಲ ಎಂದು ತಿಳಿಸಿದರು.

- ಕೊನೆಯದಾಗಿ ಮಾನ್ಯ ನೋಡಲ್‌ಅಧಿಕಾರಿರವರುಸಭೆಗೆ ಹಾಜರಾದ ಎಲ್ಲಾಅಧಿಕಾರಿ/ನೌಕರರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡಿನ ಕುಂದುಕೊರತೆಗಳತ್ತ ಗಮನಹರಿಸಿ ವಾರ್ಡ್ ಅಭಿವೃದ್ಧಿ ಪಡಿಸಲು ಸಹಕಾರ ನೀಡಬೇಕೆಂದು ಮನವಿ ಮಾಡಿದರು.

- ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದಶ್ರೀ ಹೇಮಂತ್‌ಕುಮಾರ್ ಎಸ್ ಕೆ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

30/1/2021

ಸದಸ್ಯ ಕಾರ್ಯದರ್ಶಿ–ವಾರ್ಡ್ 70 ಹಾಗೂ
ಸಹಾಯಕ ಅಭಿಯಂತರರು,

(ಕಮಲ ಹೆಚ್)
ನೋಡಲ್ ಅಧಿಕಾರಿ ವಾರ್ಡ್–70

ಪ್ರತಿಯನ್ನು:

1) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
2) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
3) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
4) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.70 ರವರ ಮಾಹಿತಿಗಾಗಿ
6) ಸಹಾಯಕ ಅಭಿಯಂತರರು (ವಿದ್ಯುತ್ ಬೆಸ್ಕಾಂ) ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
7) ಸಹಾಯಕ ಅಭಿಯಂತರರು (ವಿದ್ಯುತ್ (ಬೀದಿದೀಪ) ಬಿಬಿಎಂಪಿ ರವರ ಮಾಹಿತಿಗಾಗಿ ಸೂಕ್ತ ಕ್ರಮಕ್ಕಾಗಿ
8) ಕಛೇರಿ ಕಡತಕ್ಕೆ